**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ 138 ಛಲವಾದಿ ಜೆ.ಜೆ.ಆರ್ ನಗರ ಬೆಂಗಳೂರು

***********************************************************************************

ಸಂಖ್ಯೆ w-138/Committee/Proceding -29/2021-22 dt 05-03-2022

# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್-138

**05-03-2022** ರಂದು ಅಪರಾಹ್ನ **12.30** ಘಂಟೆಗೆ ವಾರ್ಡ್ ಸಂಖ್ಯೆ: **138** ಛಲವಾಧಿ ಪಾಳ್ಯ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮ್ಮದ್ ಜಾಫರ್ ಸಾದಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಂಟಿ ನಿರ್ದೇಶಕರು (ನಗರ ಯೋಜನೆ-ದಕ್ಷಿಣ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ **138** ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಬಂದಂತಹ ದೂರುಗಳು ಹಾಗೂ ಗ್ಯಾಂಗ್ ಮೆನ್ ಮತ್ತು ಟ್ರ್ಯಾಕ್ಟರ್ ಮತ್ತು ಕೂಲಿ ಕಾರ್ಮಿಕರನ್ನು ಉಪಯೋಗಿಸಿಕೊಂಡು ತಕ್ಷಣ ದೂರುಗಳನ್ನು ಪರಿಶೀಲಿಸಿ ಕಾರ್ಯನಿರ್ವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್-138ರ ವ್ಯಾಪ್ತಿಯಲ್ಲಿ ಅರ್ಜಿ ಸಲ್ಲಿಸಿರುವ ಫಲಾನುಭವಿಗಳ ವಿವರವನ್ನು ನೀಡುವಂತೆ.

ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ 138 ರಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಎಸ್.ಸಿ/ಎಸ್‌ಟಿ ಜನ ಸಂಖ್ಯೆಯಿದ್ದು ವಾರ್ಡ್‌ನಲ್ಲಿ ಎರಡು ವರ್ಷಗಳಿಂದ ಮತ್ತು ಹಳೆಯ ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದು, ಎಸ್.ಸಿ/ಎಸ್‌ಟಿ ಒಟ್ಟು 37 ಅರ್ಜಿಗಳು ಮತ್ತು ಹಿಂದುಳಿದವರು ಮತ್ತು ಅಲ್ಪ ಸಂಖ್ಯಾತರರು ಒಟ್ಟು 8 ಅರ್ಜಿಗಳನ್ನು ಸಲ್ಲಿಸಿರುವುದನ್ನು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಬ್ಯಾನರ್ ಮತ್ತು ಬಂಟಿಂಗ್‌ಗಳನ್ನು ತೆರವುಗೊಳಿಸಿರುವ ಬಗ್ಗೆ ವಿವರವನ್ನು ಕೋರಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಬಂಟಿಂಗ್ ಮತ್ತು ಬ್ಯಾನರ್‌ಗಳನ್ನು ತೆರವುಗೊಳಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್-138ರ ವ್ಯಾಪ್ತಿಯಲ್ಲಿ ಕೋವಿಡ್-19 ಕಾಯಿಲೆಯಿಂದ ಸತ್ತವರ ಪರಿಹಾರಕ್ಕಾಗಿ ಬಂದಿರುವಂತಹ ಅರ್ಜಿಗಳ ವಿವರವನ್ನು ಕೋರಿದರು.

ಹಿರಿಯ ಆರೋಗ್ಯ ಪರಿವೀಕ್ಷಕರು ಛಲವಾಧಿ ಪಾಳ್ಯದಲ್ಲಿ ಯು.ಬಿ ಸಂಖ್ಯೆ ಇಲ್ಲದೇ ಮೃತಪಟ್ಟಿರುವ ಅರ್ಜಿಗಳಿಗೆ ಬಿ.ಬಿ.ಎಂ.ಪಿ ಮುಖ್ಯ ಕಛೇರಿಯಲ್ಲಿ ಪರಿಶೀಲಿಸಿ ಕುಟುಂಬಗಳಿಗೆ ಚೆಕ್ ಮೂಲಕ ಪರಿಹಾರ ಧನವನ್ನು ನೀಡುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸದಸ್ಯರು ವಾರ್ಡ್-138ರ ವ್ಯಾಪ್ತಿಯಲ್ಲಿ ಹಲವು ರೀತಿಯಲ್ಲಿ ಬೆಸ್ಕಾಂಗೆ ಸಂಬಂಧಿಸಿದ ದೂರುಗಳು ಬಂದಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸಹಾಯಕ ಕಾರ್ಯ ಪಾಲಕ ಅಭಿಯಂತರು(ಬೆಸ್ಕಾಂ) ರವರ ಪ್ರತಿನಿದಿಯು ಸದರಿ ವಿಷಯದ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ 138ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್-138ರ ಮಾರ್ಷಲ್ ಗಳು ಒಟ್ಟು ವಿಧಿಸಿದ ದಂಡ ರೂ. 5000 ಎಸ್‌ಡಬ್ಲೂಎಂ. ದಂಡ ರೂ. 4500 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಛೇರಿಗೆ ಸಲ್ಲಿಸಿರುತ್ತಾರೆ.

ಅಧ್ಯಕ್ಷರು ಡಬ್ಲೂಎಸ್‌ಎಸ್‌ಬಿ ಕಛೆರಿಗೆ ವಾರ್ಡ್ 138ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲೂಎಸ್‌ಎಸ್‌ಬಿ ಅಧಿಕಾರಿಗಳು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ಹಾಗೂ ಮನೆಗಳಿಗೆ ಆಟೋಗಳು ಸಮಯಕ್ಕೆ ಸರಿಯಾಗಿ ಹೋಗುವಂತೆ ನೋಡಿಕೊಳ್ಳಲು ಸಭೆಯಲ್ಲಿ ತಿಳಿಸಿದರು.

.. ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -137ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಮತ್ತು ವಾಹನಗಳ ಹಾಜರಾತಿ ಭೆಯಲ್ಲಿ ನೀಡಿದರು ಹಾಗೂ ಆಟೋಗಳನ್ನು ಪರಿಶೀಲಿಸಿ ಸರಿಯಾದ ಸಮಯಕ್ಕೆ ಕಸ ಸಂಗ್ರಹಣೆ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

# ಹಾಜರಿದ್ದ ವಾರ್ಡ್ ಕಮೀಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮೀತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಶ್ರೀ. ಮೊಹಮ್ಮದ್ ಜಾಫರ್ ಸಾದಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಂಟಿ ನಿರ್ದೇಶಕರು (ನಗರ ಯೋಜನೆ-ದಕ್ಷಿಣ) ದೂ.ಸಂಖ್ಯೆ | ಅಧ್ಯಕ್ಷರು | M J Sadik |
| 2 | ಶ್ರೀ ಗಿರಿಧರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 138, ಬಿ.ಬಿ.ಎಂ.ಪಿ, ದೂ. 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್, ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು. ವಾರ್ಡ್ -138 | ಸದಸ್ಯರು | H. Latha |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ ದೂ. 9342582372 ಶ್ರೀ ಬಾಬು (ಕೆಲಸ ಪರಿವೀಕ್ಷಕರು) | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ದೂ. 9845563157 | ಸದಸ್ಯರು | H. Latha |
| 6 | ಶ್ರೀ ಮೊಹಮದ್ ಸಾಧೀಕ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ನಂ. 9945373444 | ಸದಸ್ಯರು | for Tabrez |
| 7 | ಶ್ರೀ ಮುಸ್ತಕ್ ಶರೀಫ್ ದೂ. 9880960040 ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ | ಸದಸ್ಯರು | M Sharif |
| 8 | ಶ್ರೀ ಶಿವಯ್ಯ (ಆರ್.ಐ) 9480685303 ಕಂದಾಯ ಪರಿವೀಕ್ಷಕರು | ಸದಸ್ಯರು | — |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ ಗೀತಾ ಹೆಚ್, ದೂ. 9986537126 | ಸದಸ್ಯರು | H. Latha |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ | ಸದಸ್ಯರು | [signature] |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂತರರು , (ಬೇಸ್ಕಂ)ರವರ ಪ್ರತಿನಿಧಿ | ಸದಸ್ಯರು | [signature] |

[signature]
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 138
ವಾರ್ಡ್ ಹಂತದ ಸಮೀತಿ

M J Sadik 5/3/2022.
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 138